ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ

ಗುರುವಾರ, ದಿನಾಂಕ: 4ನೇ ಫೆಬ್ರುವರಿ, 2021

ರಾಜ್ಯ ಸರ್ಕಾರಿ ಹುದ್ದೆಗಳಲ್ಲಿ ವಿಕಲಚೇತನರ ಮುಂಬಡ್ತಿಯಲ್ಲಿ ಮೀಸಲಾತಿ ಬಗ್ಗೆ

ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜ್)(ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

407 (421) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯ ಸರ್ಕಾರದಲ್ಲಿ ಸೇವೆ ಸಲ್ಲಿಸುತ್ತಿರುವ ವಿಕಲಚೇತನರ ಸರ್ಕಾರಿ ನೌಕರರುಗಳಿಗೆ ಮುಂಬಡ್ತಿಯಲ್ಲಿ ಶೇಕಡಾ ಮೂರರಷ್ಟು (ಶೇ.3) ಮೀಸಲಾತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ; ಪ್ರಸ್ತಾವನೆಯ ಬಗ್ಗೆ ಆದೇಶ ಹೊರಡಿಸಿ ಜಾರಿಗೆ ತರಲು ಕ್ರಮ ತೆಗೆದುಕೊಳ್ಳಲಾಗುವುದೇ;

(ಆ) ಅನ್ಯ ರಾಜ್ಯಗಳಲ್ಲಿ ವಿಕಲಚೇತನರಿಗೆ ಮುಂಬಡ್ತಿಯಲ್ಲಿ ಮೀಸಲಾತಿ ಸೌಲಭ್ಯ ಕಲ್ಪಿಸಲಾಗಿದೆಯೇ; ರಾಜ್ಯದಲ್ಲಿರುವ ಈ ನೀತಿಯನ್ನು ಜಾರಿಗೆ ತರಲು ಕ್ರಮ ವಹಿಸಲಾಗುವುದೇ ?